ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ,** ಸಾರ್ವಜನಿಕ ಶಿಕ್ಷಣ ಇಲಾಖೆ,**ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು –1**

ಸಂಖ್ಯೆ:ಆ.ಸ/ಶಿ.ಮಿ/ಶಿ.ಸೇ.ಮಾಹಿತಿ–01/2020–21 ದಿನಾಂಕ.03–10–2020

## ಸುತ್ತೋಲೆ

ವಿಷಯ:– ಶಿಕ್ಷಕರ ಸೇವಾ ಮಾಹಿತಿಯನ್ನು ಪರಿಶೀಲಿಸಿ ಶಿಕ್ಷಕರ ಮಿತ್ರ (EEDS) ತಂತ್ರಾಂಶದಲ್ಲಿ ಇಂದೀಕರಿಸುವ ಬಗ್ಗೆ.

ಉಲ್ಲೇಖ:–1)ದಿನಾಂಕ:18–09–2020ರಂದು ನಡೆದ ವಿಡಿಯೋ ಕಾನ್ಫರೆನ್ಸ್‌ನ ಸೂಚನೆಗಳಂತೆ.

2)ಇ–ಆಡಳಿತ:ಶಿ.ಸೇ.ಮಾಹಿತಿ 01/2020–21 ದಿನಾಂಕ:25–09–2020.

******

ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹ ಶಿಕ್ಷಕರ ಮಾಹಿತಿಯನ್ನು 2017ರಿಂದ ಶಿಕ್ಷಕರ ಸೇವಾ ಮಾಹಿತಿ ತಂತ್ರಾಂಶ(ಟಿ.ಡಿ.ಎಸ್)ನಲ್ಲಿ ಅಳವಡಿಸಲಾಗಿದ್ದು ಇದನ್ನು ಶಿಕ್ಷಕ ಮಿತ್ರ (EEDS) ತಂತ್ರಾಂಶಕ್ಕೆ ವರ್ಗಾಯಿಸಲಾಗಿದೆ.

ಉಲ್ಲೇಖ(2)ರ ಸುತ್ತೋಲೆಯಲ್ಲಿ ಎಲ್ಲಾ ಕಛೇರಿಯ ಡಿ.ಡಿ.ಓಗಳು ತಮ್ಮ ಅಧೀನ ಶಾಲೆ/ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲಾ ವೃಂದದ ಶಿಕ್ಷಕರು ಹಾಗೂ ಮುಖ್ಯ ಶಿಕ್ಷಕರ ಸೇವಾ ಮಾಹಿತಿಯನ್ನು ದಿನಾಂಕ:02–10–2020ರೊಳಗೆ ಪರಿಶೀಲಿಸಿ ಇಂದೀಕರಿಸಲು ತಿಳಿಸಲಾಗಿತ್ತು. ಹಲವಾರು ಡಿ.ಡಿ.ಓಗಳು ಈ ಕಾರ್ಯವನ್ನು ಪೂರ್ಣಗೊಳಿಸಲು ಹೆಚ್ಚಿನ ಕಾಲಾವಕಾಶ ಕೇಳಿರುವುದರಿಂದ ದಿನಾಂಕ:12–10–2020ರವರೆಗೆ ವಿಸ್ತರಿಸಲಾಗಿದೆ. ಉಲ್ಲೇಖ(2)ರನ್ವಯ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.

ಈ ಕಾರ್ಯವನ್ನು ಪ್ರಥಮಾದ್ಯತೆ ಮೇಲೆ ನಿರ್ವಹಿಸುವುದು. ಶಿಕ್ಷಕರ ಸೇವಾ ಮಾಹಿತಿಯಲ್ಲಿ ತಪ್ಪುಗಳಾಗಿರುವ ಬಗ್ಗೆ ಅಥವಾ ಅ ಕಾರಣದಿಂದ ವರ್ಗಾವಣೆ ಅಥವಾ ಇತರೆ ಸೇವಾ ಸೌಲಭ್ಯಗಳಿಂದ ವಂಚಿತರಾಗಿರುವ ಬಗ್ಗೆ ಯಾವುದೇ ದೂರುಗಳು ಸ್ವೀಕೃತವಾದಲ್ಲಿ ಸಂಬಂಧಿಸಿದ ಡಿ.ಡಿ.ಓ ರವರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಿದೆ.

ನಿರ್ದೇಶಕರು
ಉರ್ದು ಹಾಗೂ ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ
ನಿರ್ದೇಶನಾಲಯ ಹಾಗೂ ವರ್ಗಾವಣಾ ಕೋಶ.

ಇವರಿಗೆ:

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ)
2. ರಾಜ್ಯದ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ)
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು,
4. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)

ಪ್ರತಿಯನ್ನು:-

1. ಮಾನ್ಯ ಆಯುಕ್ತರು, ಸಾ.ಶಿ.ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.
3. ಅಪರ ಆಯುಕ್ತರು, ಗುಲ್ಬರ್ಗಾ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಅಪರ ಆಯುಕ್ತರು, ಧಾರವಾಡ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
6. ನಿರ್ದೇಶಕರು, ಪ್ರೌಢ ಶಿಕ್ಷಣ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8. ನಿರ್ದೇಶಕರು, ಕ.ಪ್ರೌ. ಶಿ.ಪ.ಮಂಡಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
9. ನಿರ್ದೇಶಕರು, ಇತರೆ ಪರೀಕ್ಷೆಗಳು, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
10. ನಿರ್ದೇಶಕರು, ಕ.ಪ.ಪು.ಸಂಘ(ರಿ)., ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
11. ನಿರ್ದೇಶಕರು, ಸಿಸ್ಲೆಪ್, ಧಾರವಾಡ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
12. ವಿಭಾಗೀಯ ಜಂಟಿ ನಿರ್ದೇಶಕರು, ಬೆಂಗಳೂರು ಮೈಸೂರು , ಬೆಳಗಾಂ, ಕಲ್ಬುರ್ಗಿ ವಿಭಾಗ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
13. ಹಿರಿಯ ಸಹಾಯಕ ನಿರ್ದೇಶಕರು(ಇ-ಆಡಳಿತ), ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು
14. ಕಛೇರಿ ಪ್ರತಿ.

**